வென்றவன் தேசிய நாளிதழ்
தெலுங்கானா,ஆந்திரா,கர்நாடகா,தமிழ்நாடு

తెలుగు జాతీయ దినపత్రిక
అక్షర విజేత
తెలంగాణ, ఆంధ్రప్రదేశ్, తమిళనాడు, కర్ణాటక

ಅಕ್ಷರ ವಿಜೇತ
ನಿಜ ನಿರ್ಭಯ ನಿಷ್ಪಕ್ಷ ಎಡಿಟರ್: ಅನಿಲ್‌ಕುಮಾರ್

Monday 01 September 2025 | RNI: TELTEL/2021/81079 | website: www.Vijethadaily.com

# 'ಡಿ.ಕೆ.ಶಿವಕುಮಾರ್ ಬಿಜೆಪಿ ಕಡೆ ಒಂದು ಕಾಲಿಟ್ಟಿದ್ದಾರೆ, ದೆಹಲಿಯಲ್ಲಿ ಚರ್ಚೆಯೂ ಆಗಿದೆ'

**ಅಕ್ಷರ್ ವಿಜೇತ ,ಬೆಂಗಳೂರು :**

ಡಿ.ಕೆ.ಶಿವಕುಮಾರ್ ಅವರು ಸಿಎಂ ಕುರ್ಚಿಯ ಆಕಾಂಕ್ಷಿ ಎನ್ನುವುದು ಇಡೀ ರಾಜ್ಯ ರಾಜಕೀಯ ವಲಯದ ಚರ್ಚಾ ವಿಷಯ. ಆದರೆ ಸಿದ್ದರಾಮಯ್ಯ ಅವರು ತಾನೇ ಪೂರ್ಣಾವಧಿ ಸಿಎಂ ಎನ್ನುವ ಮೂಲಕ ಶಾಕ್ ಕೊಟ್ಟಿದ್ದಾರೆ. ಅವಕಾಶ ಬಂದಾಗ ಸಿಎಂ ಆಗೇ ಆಗ್ತೀನಿ ಅನ್ನೋದು ಡಿಕೆ ಶಿವಕುಮಾರ್ ಅವರ ಬಲವಾದ ನಂಬಿಕೆ. ಇತ್ತೀಚೆಗೆ ಆರ್‌ಎಸ್‌ಎಸ್ ಗೀತೆ ಹಾಡುವ ಮೂಲಕ ಸ್ವಪಕ್ಷದವರ ಕೆಂಗಣ್ಣಿಗೆ ಗುರಿಯಾಗಿದ್ದ ಡಿಕೆಶಿ ಕ್ಷಮೆ ಕೇಳಿ, ನಾನು ಕಾಂಗ್ರೆಸ್‌ನ ನಿಷ್ಠಾವಂತ, ಸಾಯುವವರೆಗೆ ಕಾಂಗ್ರೆಸ್‌ನಲ್ಲೇ ಇರುತ್ತೇನೆ ಎಂದಿದ್ದರು. ಈ ಬೆಳವಣಿಗೆಯ ನಡುವೆ ಡಿ.ಕೆ.ಶಿವಕುಮಾರ್ ಅವರು ಬಿಜೆಪಿಗೆ ಹೋಗ್ತಾರೆ ಎಂಬ ಚರ್ಚೆ ಶುರುವಾಗಿದೆ. ಡಿಕೆ ಶಿವಕುಮಾರ್ ಆಗಲೇ ಒಂದು ಕಾಲು ಬಿಜೆಪಿ ಕಡೆ ಇಟ್ಟಾಗಿದೆ ಎಂದು ಶಾಸಕರೊಬ್ಬರು ಬಾಂಬ್ ಸಿಡಿಸಿದ್ದಾರೆ.ಬಿಜೆಪಿ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಈ ಸ್ಫೋಟಕ ಹೇಳಿಕೆ ನೀಡಿದ್ದಾರೆ. 'ಡಿಕೆ ಶಿವಕುಮಾರ್ ನಾಟಕ ಮಾಡ್ತಿದ್ದಾರೆ. ಅವರು ಈಗಾಗಲೇ ಬಿಜೆಪಿ ಕಡೆಗೆ ಒಂದು ಕಾಲಿಟ್ಟಿದ್ದಾರೆ.





ಬಿಜೆಪಿಗೆ ಬರುವ ಬಗ್ಗೆ ಒಂದು ಚರ್ಚೆ ಕೂಡ ನಡೆದಿದೆ. ಆದರೆ ಅವರ ಹಿಂದೆ ಸಾಕಷ್ಟು ಶಾಸಕರು ಇಲ್ಲ ಎಂಬ ಕಾರಣಕ್ಕೆ ಸುಮ್ಮನಾಗಿದ್ದಾರೆ. ದೆಹಲಿಯಲ್ಲಿ ಡಿಕೆ ಶಿವಕುಮಾರ್ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ನೇತೃತ್ವದಲ್ಲಿ ಚರ್ಚೆಯೂ ನಡೆದಿದೆ' ಎಂದು ಹೇಳಿದ್ದು, ರಾಜಕೀಯ ವಲಯದಲ್ಲಿ ಸಂಚಲನ ಮೂಡಿಸಿದೆ.

ಕಾಂಗ್ರೆಸ್‌ನ 70 ಶಾಸಕರು ಬಿಜೆಪಿಗೆ'

'ಡಿಕೆಶಿ ಹಾಗೂ ವಿಜಯೇಂದ್ರ ನೇತೃತ್ವದಲ್ಲಿ 60ರಿಂದ 70 ಕಾಂಗ್ರೆಸ್ ಶಾಸಕರನ್ನ ಕರೆತರುತ್ತೀವಿ ಎಂಬ ಚರ್ಚೆಯೂ ಆಗಿದೆ. ಮುಂದೆ ನಮಸ್ತೆ ಸದಾ ವತ್ಸಲೇ ಹಾಡ್ತೀವಿ ಎಂದು ಹಾಡಿದ್ದಾರಷ್ಟೇ. ನಮಗಿರುವ ಮಾಹಿತಿ ಪ್ರಕಾರ ಡಿಕೆ ಶಿವಕುಮಾರ್ ಅವರ ಹಿಂದೆ 13 ಜನ ಶಾಸಕರಿಲ್ಲ. ಎಲ್ಲರೂ ಸಿದ್ದರಾಮಯ್ಯ ಅವರ ಕಡೆ ಇದ್ದಾರೆ. ನನಗೆ ನಮ್ಮ ಪಕ್ಷದ ಹೈಕಮಾಂಡ್ ನಾಯಕರೊಬ್ಬರು ಇದೇ ವಿಚಾರ ಕೇಳಿದ್ರು. ಅದಕ್ಕೆ ನಾನು ಒಂದು ಹತ್ತು ಮಂದಿ ಇರಬಹುದು. ಬಿಜೆಪಿಗೆ ಅಂದ್ರೆ, ಅವರೂ ಬರೋಲ್ಲ ಎಂದೆ. ಅದಕ್ಕೆ ಅವರೂ ಕೂಡ ಹೌದು ಅಂದ್ರು' ಎಂದಿದ್ದಾರೆ.7

'ಇನ್ನು ಡಿಕೆ ಶಿವಕುಮಾರ್ ಬಿಜೆಪಿಗೆ ಬಂದ್ರೆ, ಅವರೇ ಸಿಎಂ, ವಿಜಯೇಂದ್ರ ಉಪಮುಖ್ಯಮಂತ್ರಿ ಆಗಬಹುದು. ಇಬ್ಬರೂ ಸೇರಿ ಕರ್ನಾಟಕವನ್ನು ಮಾರಿಬಿಡುತ್ತಾರೆ ಎಂದಿದ್ದಾರೆ. ಅದಕ್ಕೆ ನಾವು ಡಿಕೆ ಶಿವಕುಮಾರ್ ಬೇಡ ಅಂತಿದ್ದೀವಿ. ಸಿದ್ದರಾಮಯ್ಯ ಅವರು ಸಾಬ್ರ ಪರ ಒಂದೆರಡು ವರ್ಷ ಮಾಡಲಿ. ಆದರೆ ಡಿಕೆ ಶಿವಕುಮಾರ್ ಸಿಎಂ ಆಗೋದು ಬೇಡವೇ ಬೇಡ. ಅವರೊಬ್ಬ ಭ್ರಷ್ಟ, ಬಿಜೆಪಿಯಲ್ಲಿ ಇವನೊಬ್ಬ ಭ್ರಷ್ಟ. ಇಬ್ಬರೂ ಸೇರಿದ್ರೆ ಕರ್ನಾಟಕದ ಗತಿ ಅಧೋಗತಿ' ಎಂದಿದ್ದಾರೆ ಯತ್ನಾಳ್. ಡಿಕೆ ಶಿವಕುಮಾರ್ ಅವರು ಇತ್ತೀಚೆಗೆ ಆರ್‌ಎಸ್‌ಎಸ್ ಗೀತೆ ಹಾಡುವ ಮೂಲಕ ಕಾಂಗ್ರೆಸ್‌ಗೆ ಶಾಕ್ ನೀಡಿದ್ದರು. ಬಳಿಕ ಸ್ಪಷ್ಟನೆಯೂ ನೀಡಿ ಕ್ಷಮೆ ಕೇಳಿದ್ದರು. ನಾನು ಹುಟ್ಟು ಕಾಂಗ್ರೆಸ್ಸಿಗ, ನಾನು ಕಾಂಗ್ರೆಸ್ಸಿಗನಾಗಿಯೇ ಸಾಯುತ್ತೇನೆ. ನನ್ನ ಪಕ್ಷನಿಷ್ಠೆಯನ್ನು ಪ್ರಶ್ನಿಸುವವರು ಮೂರ್ಖರು. ಯಾರಿಗೇ ಆಗಲಿ ನನ್ನಿಂದ ನೋವಾಗಿದ್ದರೆ ಕ್ಷಮೆ ಕೇಳಲು ಸಿದ್ಧ ಎಂದು ಹೇಳಿದ್ದರು. ಇದೀಗ ಬಸನಗೌಡ ಪಾಟೀಲ್ ಯತ್ನಾಳ್ ಅವರ ಹೇಳಿಕೆ ಚರ್ಚೆಗೆ ಗ್ರಾಸವಾಗಿದೆ.

## 1ನೇ ತರಗತಿ ವಾರ್ಷಿಕ ಶುಲ್ಕ ಒಂದಲ್ಲ ಎರಡಲ್ಲ..

### ಬರೋಬ್ಬರಿ 7.35 ಲಕ್ಷ ರೂಪಾಯಿ: ರಸೀದಿ ಭಾರೀ ವೈರಲ್



ರಾಜ್ಯದಲ್ಲಿನ ಕೆಲವೊಂದು ಖಾಸಗಿ ಶಾಲೆಗಳಲ್ಲಿ ದುಬಾರಿ ಪ್ರವೇಶ ಶುಲ್ಕ ಪಡೆಯಲಾಗುತ್ತಿದೆ ಎನ್ನುವ ಆರೋಪಗಳು ಕೇಳಿಬರುತ್ತಲಿವೆ. ಈ ನಡುವೆಯೇ ಇದೀಗ ರಾಜ್ಯ ರಾಜಧಾನಿ ಬೆಂಗಳೂರಿನ ಶಾಲೆಯೊಂದರಲ್ಲಿ 1ನೇ ತರಗತಿ ವಿದ್ಯಾರ್ಥಿಯ ವಾರ್ಷಿಕ ಶುಲ್ಕ 7.5 ಲಕ್ಷ ರೂಪಾಯಿ ಆಗಿದ್ದು, ಈ ರಸೀದಿ ಸಾಮಾಜಿಕ ಜಾಲತಾಣದಲ್ಲಿ ದೊಡ್ಡ ಮಟ್ಟದಲ್ಲಿ ಸುದ್ದು ಮಾಡುತ್ತಿದೆ.

## ಬೆಂಗಳೂರಿನ ಹೃದಯಭಾಗದಲ್ಲಿ ವೇಶ್ಯಾವಾಟಿಕೆ ದಂಧೆ:

### ಯೂಟ್ಯೂಬರ್ ವೈರಲ್ ವಿಡಿಯೋ ಇಲ್ಲಿದೆ!



ಬೆಂಗಳೂರಿನ ಹೃದಯ ಭಾಗ ಎಂದೇ ಖ್ಯಾತಿ ಗಳಿಸಿರುವ ಕೆಂಪೇಗೌಡ ಬಸ್ ನಿಲ್ದಾಣ (ಮೆಜೆಸ್ಟಿಕ್)ನಲ್ಲಿ ಅವ್ಯಾತವಾಗಿ ವೇಶ್ಯಾವಾಟಿಕೆ ನಡೆಯುತಿದೆ ಎನ್ನುವ ಆರೋಪ ಇಂದು - ನೆನ್ನೆಯದಲ್ಲ. ಹಲವು ವರ್ಷಗಳಿಂದ ಮೆಜೆಸ್ಟಿಕ್ ಸೇರಿದಂತೆ ಬೆಂಗಳೂರಿನ ಸುತ್ತಮುತ್ತಲಿನ ಪ್ರದೇಶದಲ್ಲಿ ವೇಶ್ಯಾವಾಟಿಕೆ ದಂಧೆ ನಡೆಯುತ್ತಿರುವ ಬಗ್ಗೆ ಗಂಭೀರ ಆರೋಪಗಳು ಕೇಳಿ ಬರುತ್ತಲ್ಲೇ ಇವೆ. ಇದೀಗ ಈ ವಿಷಯವಾಗಿ ವಿಡಿಯೋವೊಂದು ವೈರಲ್ ಆಗಿದ್ದು ಭಾರೀ ಚರ್ಚೆಗೆ ಕಾರಣವಾಗಿದೆ. ಯೂಟ್ಯೂಬರ್ ವಿಕಾಸ್ ಗೌಡ (Vikas Gowda) ಅವರ ವಿಡಿಯೋ ವೈರಲ್ ಆಗುತ್ತಿದೆ. ಹಲವು ಶಾಕಿಂಗ್ ವಿಚಾರಗಳು ಈ ವಿಡಿಯೋದಲ್ಲಿ ಬಹಿರಂಗವಾಗಿದೆ. ವೈರಲ್ ವಿಡಿಯೋ ಡಿಟೆಲ್ಸ್ ಇಲ್ಲಿದೆ.



## ಸೆಪ್ಟೆಂಬರ್‌ನಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಮಹಾಕ್ರಾಂತಿ; ಶ್ರೀ ಕೃಷ್ಣನ ಮೊರೆ ಹೋದ್ರಾ ಡಿ ಕೆ ಶಿವಕುಮಾರ್?

ಉಡುಪಿ, ಆಗಸ್ಟ್ 31: ರಾಜ್ಯ ಕಾಂಗ್ರೆಸ್‌ನಲ್ಲಿ ಸೆಪ್ಟೆಂಬರ್ ತಿಂಗಳಲ್ಲಿ ಮಹಾಕ್ರಾಂತಿಯಾಗಲಿದೆ ಎನ್ನುವ ಚರ್ಚೆ ನಡೆಯುತ್ತಿದೆ. ಮುಖ್ಯಮಂತ್ರಿ ಬದಲಾವಣೆ ಹಾಗೂ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಕುರಿತು ಚರ್ಚೆ ನಡೆಯುತ್ತಿದ್ದು, ಈ ನಡುವೆ ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರಾದ ಡಿ ಕೆ ಶಿವಕುಮಾರ್ ಅವರು ಉಡುಪಿಯ ಶ್ರೀ ಕೃಷ್ಣನಿಗೆ ಮೊರೆ ಹೋದ್ರಾ ಎನ್ನುವ ಚರ್ಚೆಗೆ ಕನಕಪುರ ಬಂಡೆ ಡಿ ಕೆ ಶಿವಕುಮಾರ್ ಪ್ರತಿಕ್ರಿಯಿಸಿದ್ದಾರೆ.

# ಬೆಂಗಳೂರು 2ನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಯೋಜನೆ ಸ್ಥಗಿತವಾಗುತ್ತಾ:

## ಎಂ.ಬಿ ಪಾಟೀಲ್ ಹೇಳಿದ್ದೇನು

ಬೆಂಗಳೂರು ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಪ್ರಸ್ತಾವನೆ ಪ್ರಾಥಮಿಕ ಹಂತದಲ್ಲೇ ಇದ್ದು ಇದೀಗ ಈ ವಿಷಯವಾಗಿ ಸಚಿವ ಎಂ.ಬಿ ಪಾಟೀಲ್ ಅವರು ಮೌನ ಮುರಿದಿದ್ದಾರೆ. ಅಲ್ಲದೇ ಬೆಂಗಳೂರಿನ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಯಾರೇ ಅಡ್ಡಿಪಡಿಸಿದರೂ ಅಥವಾ ಯಾವುದೇ ಅಡ್ಡಿ ಎದುರಾದರೂ ಇದರಿಂದ ನಾವು ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ ಎಂದು ಹೇಳಿದ್ದಾರೆ. ಅಲ್ಲದೇ ಇದೇ ಸಂದರ್ಭದಲ್ಲಿ ಬೆಂಗಳೂರಿನ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣದ ಬಗ್ಗೆ ಎಂ.ಬಿ ಪಾಟೀಲ್ ಅವರು ಮಹತ್ವದ ಮಾಹಿತಿ ಹಂಚಿಕೊಂಡಿದ್ದಾರೆ.ಬೆಂಗಳೂರು ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಪ್ರಸ್ತಾವನೆ ಪ್ರಾಥಮಿಕ ಹಂತದಲ್ಲೇ ಇದ್ದು ಇದೀಗ ಈ ವಿಷಯವಾಗಿ ಸಚಿವ ಎಂ.ಬಿ ಪಾಟೀಲ್ ಅವರು ಮೌನ ಮುರಿದಿದ್ದಾರೆ.




ಅಲ್ಲದೇ ಬೆಂಗಳೂರಿನ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಯಾರೇ ಅಡ್ಡಿಪಡಿಸಿದರೂ ಅಥವಾ ಯಾವುದೇ ಅಡ್ಡಿ ಎದುರಾದರೂ ಇದರಿಂದ ನಾವು ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ ಎಂದು ಹೇಳಿದ್ದಾರೆ. ಅಲ್ಲದೇ ಇದೇ ಸಂದರ್ಭದಲ್ಲಿ ಬೆಂಗಳೂರಿನ ಎರಡನೇ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ನಿರ್ಮಾಣದ ಬಗ್ಗೆ ಎಂ.ಬಿ ಪಾಟೀಲ್ ಅವರು ಮಹತ್ವದ ಮಾಹಿತಿ ಹಂಚಿಕೊಂಡಿದ್ದಾರೆ.

# ಬೆಂಗಳೂರಿನ ಹೃದಯಭಾಗದಲ್ಲಿ ವೇಶ್ಯಾವಾಟಿಕೆ ದಂಧೆ

ಅಕ್ಷರ್ ವಿಜೇತ ,ಬೆಂಗಳೂರು :

Indergarh- ಬೆಂಗಳೂರಿನ ವಿವಿಧ ಪ್ರದೇಶಗಳಲ್ಲಿ ವೇಶ್ಯಾವಾಟಿಕೆ ನಡೆಯುತ್ತಿದೆ. ಇದರ ಹಿಂದೆ ಕರಾಳವಾದ ದಂಧೆ ಇದೆ ಎನ್ನುವ ಮಾತುಗಳು ಪದೇ ಪದೇ ಕೇಳಿ ಬರುತ್ತಿವೆ. ಇದೀಗ ಮೆಜೆಸ್ಟಿಕ್‌ನ ಜನನಿಬಿಡ ಪ್ರದೇಶದಲ್ಲಿ ನಡೆಯುವ ಈ ದಂಧೆಯ ಕರಾಳ ಸತ್ಯಗಳು ಬಯಲಾಗಿವೆ. ಯೂಟ್ಯೂಬರ್‌ವೊಬ್ಬರ ಮಾಡಿರುವ ವಿಡಿಯೋಗೆ ಮೆಜೆಸ್ಟಿಕ್‌ನಲ್ಲಿ ನೂರಾರು ಜನ ಬೆಂಬಲ ನೀಡಿದ್ದಾರೆ. ಮೆಜೆಸ್ಟಿಕ್‌ನಲ್ಲಿ ನಡೆಯುವ ವೇಶ್ಯವಾಟಿಕೆ ದಂಧೆಯ ಬಗ್ಗೆ ನಾನು ಎರಡು ವರ್ಷಗಳ ಹಿಂದೆ ವಿಡಿಯೋ ಮಾಡಿದ್ದೆ. ಅದು ಭಾರೀ ವೈರಲ್ ಆಗಿತ್ತು. ಆದರೆ ಇನ್ನೂ ಸಮಸ್ಯೆ ಪರಿಹಾರವಾಗಿಲ್ಲ ಎಂದು ಯೂಟ್ಯೂಬರ್ ಹೇಳಿದ್ದಾರೆ.ಮೆಜೆಸ್ಟಿಕ್‌ನಲ್ಲಿ ಇನ್ನೂ ಈ ದಂಧೆ ನಿಂತಿಲ್ಲ. ಜನರ ಬಳಿ ಹಾಗೂ ವಿದ್ಯಾರ್ಥಿಗಳ ಬಳಿ ಒತ್ತಾಯಪೂರ್ವಕವಾಗಿ ದುಡ್ಡು ಕಿತ್ತುಕೊಳ್ಳಲಾಗುತ್ತಿದೆ ಎನ್ನುವ ಆರೋಪಗಳು ಕೇಳಿ ಬಂದಿವೆ. ತುಂಬಾ ಜನ ಹೆಣ್ಣು ಮಕ್ಕಳಿಗೂ ಭಯವಾಗುತ್ತಿದೆ. ಫೋನು ಮತ್ತು ದುಡ್ಡು ಕಿತ್ತುಕೊಳ್ಳುತ್ತಿದ್ದಾರೆ ಎಂದು ಜನ ಹೇಳುತ್ತಿದ್ದಾರೆ. ಮೆಜೆಸ್ಟಿಕ್‌ನ ಅಂಡರ್‌ಪಾಸ್‌ನಲ್ಲಿ ಈ ದಂಧೆ ಅವ್ಯಾತವಾಗಿ ನಡೆಯುತ್ತಿದೆ. ಅಲ್ಲದೇ ಇಲ್ಲಿ ನಿತ್ಯವೂ ಲಕ್ಷಾಂತರ ಜನ ಓಡಾಡುತ್ತಾರೆ. ಸಾವಿರಾರು ಜನರಿಗೆ ಕಿರುಕುಳ ಮುಂದುವರಿದಿದೆ ಎಂದು ಯೂಟ್ಯೂಬರ್ ವಿಡಿಯೋದಲ್ಲಿ ಹೇಳಿದ್ದಾರೆ.ನಗರದಲ್ಲಿ ಈ ರೀತಿ ದಂಧೆ ನಡೆಯುತ್ತಿರುವುದರಿಂದ ಬೆಂಗಳೂರಿಗೆ ಕೆಟ್ಟ ಹೆಸರು ಹಾಗೂ ಕಳಂಕ ಬರುತ್ತಿದೆ. ಅಂಡರ್ ಪಾಸ್‌ನಲ್ಲಿ ಸಮಸ್ಯೆ ಪರಿಹಾರವಾಗಿದೆಯಾದರೂ ಫ್ಲೈಓವರ್‌ನಲ್ಲಿ ಸಮಸ್ಯೆ ಪರಿಹಾರವಾಗಿಲ್ಲ.

ಹಲ್ಲೆ ಮಾಡುವುದಕ್ಕೆ ಯತ್ನ: ಇನ್ನು ವಿಕಾಸ್ ಅವರು ಈ ವಿಡಿಯೋ ಮಾಡುವುದಕ್ಕೆ ಪ್ರಯತ್ನಿಸಿದಾಗ ಅವರ ಮೇಲೆ ಕೆಲವರು ಹಲ್ಲೆ ಮಾಡುವುದಕ್ಕೆ ಪ್ರಯತ್ನಿಸಿರುವುದು ಹಾಗೂ ಅವಾಚ್ಯ ಶಬ್ದಗಳನ್ನು ಬಳಸಿ ನಿಂದಿಸಿರುವುದು ಈ ವೈರಲ್ ವಿಡಿಯೋದಲ್ಲಿದೆ. ಮೆಜೆಸ್ಟಿಕ್‌ನ ಫ್ಲೈಓವರ್‌ನ ಮೇಲೆ ನಡೆಯುತ್ತಿದೆ ಎನ್ನಲಾದ ವೇಶ್ಯಾವಾಟಿಕೆ ವಿಚಾರಕ್ಕೆ ಸಂಬಂಧಿಸಿದಂತೆ ಮಾಡಿರುವ ವಿಡಿಯೋ ಇದೀಗ ಸೋಷಿಯಲ್ ಮೀಡಿಯಾದಲ್ಲಿ ಭಾರೀ ವೈರಲ್ ಆಗುತ್ತಿದೆ. ಈ ವಿಡಿಯೋದಲ್ಲಿ ಹಲವರು ಹೌದು ನಮಗೂ ಇದೇ ರೀತಿ ಕೆಟ್ಟ ಅನುಭವಗಳು ಆಗಿವೆ ಎಂದು ತಮ್ಮ ಅನುಭವವನ್ನು ಹಂಚಿಕೊಂಡಿದ್ದಾರೆ.

# 1ರಿಂದ 7ನೇ ತರಗತಿಯ ಮಕ್ಕಳಿಗೆ "ರೂಮ್ ಟು ರೀಡ್" ಸುತ್ತೋಲೆ: ಹೊಸ ವಿವಾದ!

ಅಕ್ಷರ್ ವಿಜೇತ ,ಬೆಂಗಳೂರು :

ಕರ್ನಾಟಕ ಸರ್ಕಾರವು ಇದೀಗ ಮತ್ತೊಂದು ಧಾರ್ಮಿಕ ವಿವಾದವನ್ನು ಎದುರಿಸುತ್ತಿದೆ. ಇತ್ತೀಚೆಗೆ ಧರ್ಮಸ್ಥಳ ಪ್ರಕರಣ ಹಾಗೂ ಮೈಸೂರು ದಸರಾ ಉದ್ಘಾಟನೆ ವಿಷಯದಲ್ಲಿ ಗೊಂದಲಗಳು ಸೃಷ್ಟಿಯಾಗಿದ್ದು, ದಸರಾ ಉದ್ಘಾಟನೆ ವಿಚಾರದಲ್ಲಿ ಅನವಶ್ಯಕವಾದ ವಿವಾದ ಸೃಷ್ಟಿಯಾಗಿದೆ. ಇದರ ಬೆನ್ನಲ್ಲೇ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಹೇಳಿರುವ ಮಾತುಗಳು ಭಾರೀ ಆಕ್ರೋಶಕ್ಕೂ ಕಾರಣವಾಗಿತ್ತು. ಈ ರೀತಿ ಇರುವಾಗಲೇ ಮತ್ತೊಂದು ವಿವಾದ ಮುನ್ನೆಲೆಗೆ ಬಂದಿದೆ.ಪ್ರಾಥಮಿಕ ಶಾಲೆಗಳ 1ರಿಂದ 7ನೇ ತರಗತಿಯ ಮಕ್ಕಳಲ್ಲಿ ಓದಿನ ಅಭ್ಯಾಸ ಬೆಳೆಸುವ ಹೆಸರಿನಲ್ಲಿ ಕರ್ನಾಟಕ ಸರ್ಕಾರ "ರೂಮ್ ಟು ರೀಡ್" ಯೋಜನೆಗೆ ಸಂಬಂಧಿಸಿದ ಸರ್ಕ್ಯುಲರ್ ಹೊರಡಿಸಿದ್ದು ಇದೀಗ ಈ ವಿಷಯವು ವಿವಾದ ಸ್ವರೂಪ ಪಡೆದುಕೊಂಡಿದೆ. ಈ ವಿಚಾರದ ಬಗ್ಗೆ ಬಿಜೆಪಿ ಆಕ್ಷೇಪ ವ್ಯಕ್ತಪಡಿಸಿದೆ.ಈ ಸಂಬಂಧ ಸೋಷಿಯಲ್ ಮೀಡಿಯಾ ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣ ಸ್ವಾಮಿ ಅವರು, ಪ್ರಾಥಮಿಕ ಶಾಲೆಗಳ 1ರಿಂದ 7ನೇ ತರಗತಿಯ ಮಕ್ಕಳಲ್ಲಿ ಓದಿನ ಅಭ್ಯಾಸ ಬೆಳೆಸುವ ಹೆಸರಿನಲ್ಲಿ ಕರ್ನಾಟಕ ಸರ್ಕಾರ "ರೂಮ್ ಟು ರೀಡ್" ಯೋಜನೆಗೆ ಸಂಬಂಧಿಸಿದ ಸರ್ಕ್ಯುಲರ್ ಹೊರಡಿಸಿದೆ. ಪುಸ್ತಕ ಮತ್ತು ಲೈಬ್ರರಿಗಳ ಮಹತ್ವವನ್ನು ಪ್ರೋತ್ಸಾಹಿಸುವಂತೆ ಕಂಡರೂ, ಇದರೊಳಗೆ ಬಚ್ಚಿಟ್ಟಿರುವ ಅಸಲಿ ಉದ್ದೇಶವೇ ಬೇರೆ ಎನ್ನುವುದು ಸ್ಪಷ್ಟವಾಗಿದೆ.





## ಸರ್ಕ್ಯುಲರ್‌ನಲ್ಲಿ ಸೇರಿಸಿರುವ QR ಕೋಡ್

ಸರ್ಕ್ಯುಲರ್‌ನಲ್ಲಿ ಸೇರಿಸಿರುವ QR ಕೋಡ್ ವಿದ್ಯಾರ್ಥಿಗಳನ್ನು ಈದ್ ಮಿಲಾದ್ ಕುರಿತು ಮಾತ್ರ ಓದಲು ಹಾಗೂ ತಿಳಿದುಕೊಳ್ಳಲು ಮಾರ್ಗದರ್ಶನ ನೀಡುತ್ತದೆ. ತಟಸ್ಥವಾಗಿ ಶಿಕ್ಷಣ ನೀಡಬೇಕಾದ ಸರ್ಕಾರ, ಒಂದು ಧರ್ಮಕ್ಕೆ ಮಾತ್ರ ವಿಶೇಷ ಪ್ರೋತ್ಸಾಹ ನೀಡುವುದು ಮಕ್ಕಳ ಮನಸ್ಸಿನ ಮೇಲೆ ಏಕಪಕ್ಷೀಯ ಪ್ರಚಾರ ಹೇರಿದಂತಾಗಿದೆ. ಹಿಂದೂ ಹಬ್ಬಗಳಿಗೆ ನೂರಾರು ಕಾನೂನುಗಳನ್ನು ತರುವ ನೀವು - ಮುಸಲ್ಮಾನರ ಹಬ್ಬಗಳಿಗೆ ಹೆಚ್ಚಿನ ಅವಕಾಶಗಳನ್ನು ಮಾಡಿಕೊಡುತ್ತಿರಿ, ಈ ನಮ್ಮ ಸೆಲೆಕ್ಟೀವ್ ಸೆಕ್ಯುಲರಿಸಮ್ ಏಕೆ ಎಂದು ಪ್ರಶ್ನೆ ಮಾಡಿದ್ದಾರೆ. ಮುಂದುವರಿದು ಇಂತಹ ತುಷ್ಟೀಕರಣ ರಾಜಕಾರಣವನ್ನು ಶಿಕ್ಷಣದ ಹೆಸರಿನಲ್ಲಿ ಮುಂದೂಡುವುದು ಕಾಂಗ್ರೆಸ್ ಸರ್ಕಾರದ ಸೆಲೆಕ್ಟೀವ್ ಸೆಕ್ಯುಲರಿಸಮ್‌ನ ಜೀವಂತ ಉದಾಹರಣೆ. ತುಷ್ಟೀಕರಣಕ್ಕೂ ಒಂದು ಇತಿ - ಮಿತಿ ಬೇಡವೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ. ಶಾಲೆಗಳು ಜ್ಞಾನ ಮಂದಿರವಾಗಲಿ, ಸರ್ಕಾರದ ಮತಬೇಟೆ ರಾಜಕೀಯದ ಪ್ರಯೋಗಾಲಯವಾಗಬಾರದು ಎಂದು ಸೋಷಿಯಲ್ ಮೀಡಿಯಾ ಎಕ್ಸ್‌ನಲ್ಲಿ ಟ್ವೀಟ್ ಮಾಡಿದ್ದಾರೆ. ಈ ಟ್ವೀಟ್ ಅನ್ನು ಬಿಜೆಪಿ ಖಾತೆಯಿಂದ ಮರು ಟ್ವೀಟ್ ಮಾಡಲಾಗಿದೆ.

# ಸೆಪ್ಟೆಂಬರ್‌ನಲ್ಲಿ ಕಾಂಗ್ರೆಸ್ ಪಕ್ಷದಲ್ಲಿ ಮಹಾಕ್ರಾಂತಿ; ಶ್ರೀ ಕೃಷ್ಣನ ಮೊರೆ ಹೋದ್ರಾ ಡಿ ಕೆ ಶಿವಕುಮಾರ್?

ಉಡುಪಿಯಲ್ಲಿ ಮಾಧ್ಯಮಗಳ ಪ್ರಾರ್ಥನೆಗೆ ಇದು ಸೂಕ್ತ ಕಾಲವೇ ಎಂಬ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಮಾತನಾಡಿ, ಅದೆಲ್ಲಾ ಏನಿಲ್ಲ. ಪ್ರಾರ್ಥನೆ ನನ್ನ ಸಹಜ ಪದ್ಧತಿ. ಉಡುಪಿಯ ಕೃಷ್ಣಮಠದಿಂದ ಈ ಹಿಂದೆಯೂ ಆಹ್ವಾನ ಇತ್ತು. ನಮ್ಮ ಸರ್ಕಾರ ಬಂದ ಮೇಲೆಯೂ ಆಹ್ವಾನಿಸಿದ್ದರು. ಆದರೆ ಬರಲು ಸಾಧ್ಯವಾಗಿರಲಿಲ್ಲ. ಈಗ ಬಂದಿದ್ದೇನೆ ಎಂದು ತಿಳಿಸಿದರು."ಕೃಷ್ಣ, ಗಣಪತಿ ಹಾಗೂ ನಿಮ್ಮ (ಮಾಧ್ಯಮಗಳ) ಆಶೀರ್ವಾದ ಪಡೆಯಲು ಬಂದಿದ್ದೇನೆ. ನಿಮ್ಮದು ಸೇರಿದಂತೆ ಎಲ್ಲರ ಆಶೀರ್ವಾದ ಬೇಕು ಎಂದು ಚಟಾಕಿ ಹಾರಿಸಿದರು.ಕೆಲವರು ನನ್ನನ್ನು ಬಂಡೆ ಎಂದು ಕರೆಯುತ್ತಾರೆ. ಬಂಡೆ ಪ್ರಕೃತಿ, ಕಡಿದರೆ ಆಕೃತಿ, ಪೂಜಿಸಿದರೆ ಸಂಸ್ಕೃತಿ. ನೀವು ಬಂಡೆಯಿಂದ ಮೆಟ್ಟಿಲು, ಆಧಾರ ಸ್ತಂಭ, ಜಲ್ಲಿ, ವಿಗ್ರಹ ಮಾಡಬಹುದು. ಅದೇ ರೀತಿ ನೀವು ನನ್ನನ್ನು ಹೇಗೆ ಬೇಕಾದರೂ ಬಳಸಿಕೊಳ್ಳಬಹುದು. ನಾನು ಏನು ಮಾತನಾಡಿದರೂ ಅದರಲ್ಲಿ ತಪ್ಪು ಕಂಡು ಹಿಡಿಯುವುದೇ ಹೆಚ್ಚಾಗಿದೆ. ಹೀಗಾಗಿ ನನ್ನ ಬಾಯಿಂದ ಯಾವುದೇ ತಪ್ಪು ನುಡಿಸದಂತೆ ಶ್ರೀಕೃಷ್ಣ ಪರಮಾತ್ಮನಲ್ಲಿ ಪ್ರಾರ್ಥಿಸುತ್ತೇನೆ. ಶ್ರೀಕೃಷ್ಣನ ದಿವ್ಯ ದರ್ಶನ ಮಾಡಿ ಶ್ರೀಗಳ ಜೊತೆಯಲ್ಲಿ ಮಧ್ವಾಚಾರ್ಯರ ಅಂಚೆಚೀಟಿ ಬಿಡುಗಡೆ ಮಾಡುವ ಅವಕಾಶ ಸಿಕ್ಕಿದ್ದು ನನ್ನ ಭಾಗ್ಯ ಎಂದು ಭಾವಿಸುತ್ತೇನೆ ಎಂದು ತಿಳಿಸಿದರು.ಧರ್ಮ, ಪೂಜೆ, ಭಕ್ತಿ ಪ್ರದರ್ಶನಕ್ಕಿರುವ ವಸ್ತುಗಳಲ್ಲ. ಎಲ್ಲರ ಆಚಾರ ವಿಚಾರಗಳನ್ನು ಒಟ್ಟಿಗೆ ತೆಗೆದುಕೊಂಡು ಹೋಗಬೇಕಿರುವುದು ನಮ್ಮ ಕರ್ತವ್ಯ. ನಾನು ಅನೇಕ ಬಾರಿ ಕೃಷ್ಣನ ಮಠಕ್ಕೆ ಹಾಗೂ ಕೃಷ್ಣನ ದಿವ್ಯ ಸಾನಿಧ್ಯಕ್ಕೆ ಬಂದಿದ್ದೇನೆ. ಶ್ರೀಗಳು ನನಗೆ ಕೃಷ್ಣನ ವಿಶ್ವರೂಪ ದರ್ಶನ ತೋರಿಸಿದರು. ನಾನು ಬಂಧಿಖಾನೆ ಸಚಿವನಾಗಿದ್ದಾಗಲೂ ನನಗೆ ಮಠದಿಂದ ಆಹ್ವಾನ ಬಂದಿತ್ತು. ಈ ವಿಶ್ವರೂಪ ದರ್ಶನವನ್ನು ನೋಡಿದಾಗ ನನಗೆ ನನ್ನ 50-60 ವರ್ಷಗಳ ಬದುಕಿನ ನೆನಪು ತಲೆಯಲ್ಲಿ ಸುಳಿದವು.ನಮ್ಮ ಧರ್ಮ ಮನುಷ್ಯನಿಗೆ ಆತ್ಮ ವಿಶ್ವಾಸ ಹೆಚ್ಚಿಸುವ ದಾರಿ. ಈ ವೇದಿಕೆ ಮೇಲೆ ಶ್ರೀಗಳು ಮೂರ್ನಾಲ್ಕು ಪುಸ್ತಕ ನೀಡಿದರು. ಅವರು ವಿಶ್ವಸಂಸ್ಥೆಯಲ್ಲಿ ಮಾಡಿದ ಭಾಷಣವನ್ನು ನೋಡಿದೆ. ಆ ಭಾಷಣದಲ್ಲಿ ಅವರು, 'ನಾವು ಧರ್ಮಕ್ಕೆ ಅಂಟಿಕೊಂಡಿರಬಾರದು. ಬಂಧಿಸಲ್ಪಡಬಾರದು. ಬದಲಾಗಿ ನಾವು ಬಯಸಿ ಇಚ್ಛಿಸುವ ಧರ್ಮವನ್ನು ಆಯ್ಕೆ ಮಾಡಿಕೊಳ್ಳಬೇಕು' ಎಂದಿದ್ದಾರೆ. ನಾನು ಅವರ ಮಾತುಗಳನ್ನು ಒಪ್ಪುತ್ತೇನೆ ಎಂದು ಹೇಳಿದರು. ಧರ್ಮ ಯಾವುದಾದರೂ ತತ್ವವೊಂದೇ. ನಾಮ ನೂರಾದರೂ ದೈವವೊಂದೇ, ಪೂಜೆ ಯಾವುದಾದರೂ ಭಕ್ತಿಯೊಂದೇ, ಕರ್ಮ ಹಲವಾದರೂ ನಿಷ್ಠೆಯೊಂದೆ. ದೇವನೊಬ್ಬ ನಾಮ ಹಲವು. ನಾವು ಅನೇಕ ಹೆಸರಿನಲ್ಲಿ ದೇವರನ್ನು ಕರೆಯುತ್ತಿದ್ದೇವೆ. ನಾವು ಶಿವ, ಕೃಷ್ಣನನ್ನು ಬೇರೆ ಬೇರೆ ಹೆಸರಿನಲ್ಲಿ ಕರೆಯುತ್ತಾ ಬಂದಿದ್ದೇವೆ. ನಾವು ಕೃಷ್ಣನನ್ನು ಯಾಕೆ ಇಷ್ಟು ಪ್ರೀತಿಯಿಂದ ಒಪ್ಪುತ್ತೇವೆ ಎಂದರೆ ಕೃಷ್ಣ ಒಬ್ಬ ಶಿಕ್ಷಕ, ಮಾರ್ಗದರ್ಶಕ, ಚಿಂತಕ, ರಾಜಕಾರಣಿ, ಪ್ರೇಮಿ, ತತ್ವಜ್ಞಾನಿ ಎಂದು ತಿಳಿಸಿದರು.ನಾವು ಯಶಸ್ಸು ಕಾಣಬೇಕಾದರೆ, ಧರ್ಮರಾಯನ ಧರ್ಮತ್ವ, ಕರ್ಣನ ದಾನತ್ವ, ಅರ್ಜುನನ ಗುರಿ, ಭೀಮನ ಬಲ, ವಿದುರನ ನೀತಿ, ಕೃಷ್ಣನ ತಂತ್ರ ಕೂಡ ಇರಬೇಕು" ಎಂದು ವೇದಿಕೆಯಲ್ಲಿದ್ದ ಸಂಸದ ಶ್ರೀನಿವಾಸ ಪೂಜಾರಿ ಅವರ ಹೆಸರನ್ನು ಉಲ್ಲೇಖಿಸಿ, "ಯಶಸ್ಸಿನ ಕಥೆಗೆ ಇವೆಲ್ಲವೂ ಬೇಕು ಎಂದು ಹೇಳಿದರು.ಶ್ರೀಗಳು ಮಾತನಾಡುತ್ತಾ ಮಧ್ವಾಚಾರ್ಯರ ಆಚಾರ ವಿಚಾರಗಳನ್ನು ಯುವಕರ ಮೂಲಕ ವಿದೇಶದಲ್ಲಿ ಪಸರಿಸಬೇಕು ಎಂದು ಹೇಳಿದರು. ಆಗ ನನಗೆ ಅಲೆಕ್ಸಾಂಡರ್ ಕಥೆ ನೆನಪಾಯಿತು. ಅಲೆಕ್ಸಾಂಡರ್ ವಿಶ್ವವನ್ನು ಗೆಲ್ಲಬೇಕು ಎಂದು ಭಾರತದತ್ತ ದಾಳಿ ಮಾಡುವ ಮುನ್ನ ತನ್ನ ಗುರು ಅರಿಸ್ಟಾಟಲ್ ಭೇಟಿ ಮಾಡುತ್ತಾನೆ. ಆಗ ಅರಿಸ್ಟಾಟಲ್ ಅವರು ನೀನು ಭಾರತವನ್ನು ಗೆಲ್ಲಬೇಕಾದರೆ, ಅಲ್ಲಿಂದ ರಾಮಾಯಣ ಗ್ರಂಥ, ಭಗವದ್ಗೀತೆ ಕೃತಿ, ಗಂಗಾ ಜಲ, ಕೃಷ್ಣನ ಕೊಳಲು ಹಾಗೂ ಓರ್ವ ತತ್ವಜ್ಞಾನಿ, ಈ ಐದು ವಸ್ತುಗಳನ್ನು ತೆಗೆದುಕೊಂಡು ಬಾ. ಆಗ ನೀನು ಇಡೀ ಭಾರತವನ್ನು ಗೆದ್ದಂತೆ ಎಂದರಂತೆ. ನಮ್ಮ ಸಂಸ್ಕೃತಿಯೇ ಈ ದೇಶದ ಆಸ್ತಿ ಎಂದು ಹೇಳಿದರು.

# 1ನೇ ತರಗತಿ ವಾರ್ಷಿಕ ಶುಲ್ಕ ಒಂದಲ್ಲ ಎರಡಲ್ಲ.. ಬರೋಬ್ಬರಿ 7.35 ಲಕ್ಷ ರೂಪಾಯಿ: ರಸೀದಿ ಭಾರೀ ವೈರಲ್



ಹೌದು.. ಬೆಂಗಳೂರಿನ ಶಾಲೆಯೊಂದರಲ್ಲಿ ಒಂದನೇ ತರಗತಿ ವಿದ್ಯಾರ್ಥಿಯ ವಾರ್ಷಿಕ ಶುಲ್ಕ 7.5 ಲಕ್ಷ ರೂಪಾಯಿ ಆಗಿದ್ದು, ಶುಲ್ಕದ ರಸೀದಿ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಈ ರಸೀದಿಯ ಫೋಟೋವನ್ನು ಪೋಷಕರೊಬ್ಬರು ತಮ್ಮ ಟ್ವಿಟರ್ ಖಾತೆಯಲ್ಲಿ ಹಂಚಿಕೊಂಡಿದ್ದು, ಇದಕ್ಕೆ ನೆಟ್ಟಿಗರು ಶಾಲಾ ಆಡಳಿತ ಮಂಡಳಿ ವಿರುದ್ಧ ಕೆಂಡ ಕಾರುತ್ತಿದ್ದಾರೆ.ಬೆಂಗಳೂರಿನ ಖಾಸಗಿ ಶಾಲೆಯ ವಾರ್ಷಿಕ ಶುಲ್ಕದ ರಸೀದಿಯ ಫೋಟೊವನ್ನು D.Muthukrishnan ಎಂಬ ಹೆಸರಿನವರು ತಮ್ ಟ್ವಿಟರ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಒಂದನೇ ತರಗತಿಗೆ 7.5 ಲಕ್ಷ ರೂಪಾಯಿ ಆದರೆ ಹಂತ-ಹಂತವಾಗಿ ಹೆಚ್ಚಳವಾಗಿ 10ನೇ ತರಗತಿಗೆ ಶುಲ್ಕ ಎಷ್ಟಿದೆ ಎಂದು ಇಲ್ಲಿ ಹಂಚಿಕೊಳ್ಳಲಾಗಿರುವ ರಸೀದಿಯಲ್ಲಿ ಗಮನಿಸಿ.ವಾರ್ಷಿಕ ಶುಲ್ಕದ ಲೆಕ್ಕ ಇದಾದರೆ, ಮಕ್ಕಳ ಪುಸ್ತಕ, ಸಾರಿಗೆ ವೆಚ್ಚ, ಸಮವಸ್ತ್ರ, ಇತರೆ ಕಲಾ ಚಟುವಟಿಕೆ ಸೇರಿದಂತೆ ಒಂದನೇ ತರಗತಿಯ ವಿದ್ಯಾರ್ಥಿಯ ಶುಲ್ಕ 8 ಲಕ್ಷ ರೂಪಾಯಿಗೂ ಹೆಚ್ಚಳ ಆದಂತಾಗಲಿದೆ. ಶಿಕ್ಷಣ ಎನ್ನುವುದು ಮುಕ್ತ ಮಾರುಕಟ್ಟೆ ಆಗಿದ್ದು, ಶುಲ್ಕ ನಿಗದಿಪಡಿಸಲು ಮಾನದಂಡಗಳೇ ಇಲ್ಲದಂತಾಗಿದೆ.ಇದೀಗ ಭಾರೀ ಸುದ್ದಿಯಲ್ಲಿರುವ ಬೆಂಗಳೂರಿನ ಈ ಶಾಲೆಯಲ್ಲಿ ಉತ್ತಮವಾಗಿದೆ. ಆದರೆ, ಶುಲ್ಕ ಮಾತ್ರ ಇತಿಮಿತಿ ಇಲ್ಲದಂತೆ ನಿಗದಿಪಡಿಸಿದ್ದಾರೆ. ಇದನ್ನು ಗಮನಿಸಿದರೆ, ಐಟಿ ಉದ್ಯೋಗಿಗಳು ವಾರ್ಷಿಕ ಸಂಪಾದನೆ ಮಾಡುವ 50 ಲಕ್ಷ ರೂಪಾಯಿಯಲ್ಲಿ ಅರ್ಧಕರ್ಧ ತಮ್ಮ ಮಕ್ಕಳ ಶಿಕ್ಷಣಕ್ಕೆ ಖರ್ಚು ಮಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿಬಿಟ್ಟಿದೆ. ಬೆಂಗಳೂರಿನ ಈ ಶಾಲೆಯ ಶುಲ್ಕದ ವಿರುದ್ಧ ನೆಟ್ಟಿಗರು ಸೇರಿದಂತೆ ಹಲವು ಶಿಕ್ಷಣ ಶಿಕ್ಷಣ ತಜ್ಞರು ಆಕ್ರೋಶ ಹೊರಹಾಕುತ್ತಿದ್ದಾರೆ.ಈ ಶಾಲೆ ಶುಲ್ಕ ಕಟ್ಟಿಸಿಕೊಳ್ಳಲೆಂದೇ ಇದೆಯಾ ಅಥವಾ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುತ್ತದೆಯೋ ಗೊತ್ತಿಲ್ಲ. ಇದಕ್ಕೆ ಸಂಬಂಶಪಟ್ಟ ಇಲಾಖೆಗಳು ಕಟ್ಟುನಿಟ್ಟಿನ ಕ್ರಮ ಜರುಗಿಸಿ ಈ ಶುಲ್ಕದ ಹೊರೆಯನ್ನು ಇಳಿಸಬೇಕು ಎಂದು ನೆಟ್ಟಿಗರು ಹೇಳುತ್ತಿದ್ದಾರೆ. ಅಲ್ಲದೆ, ಇದು ಶಿಕ್ಷಣ ಸಂಸ್ಥೆಯೋ ಅಥವಾ ಬರೀ ಹಣ ಮಾಡುವ ಸಂಸ್ಥೆಯೋ ಎಂದು ಆಕ್ರೋಶ ಹೊರಹಾಕುತ್ತಿದ್ದಾರೆ.ಈ ರಸೀದಿ ನೋಡಿದರೆ, ಎಂಥವರಿಗೂ ಕೋಪ ಬರುವುದಂತೂ ಸಹಜ. ಆ ಪರಿ ಶುಲ್ಕವನ್ನು ನಿಗದಿಪಡಿಸಿದ್ದಾರೆ. ಹೀಗೆ ಆದರೆ, ಸಾಮಾನ್ಯ ಜನರ ಮಕ್ಕಳ ವಿದ್ಯಾಭ್ಯಾಸದ ಕಥೆ ಏನು. ಇಂತಹ ಶಿಕ್ಷಣ ಸಂಸ್ಥೆಗಳು ಏರುವ ಶುಲ್ಕದ ಹೊರೆಯಿಂದ ತಪ್ಪಿಸಿಕೊಳ್ಳಲು ಕೆಲವರು ತಮ್ಮ ಮಕ್ಕಳನ್ನು ಶಾಲೆಗೆ ಕಳುಹಿಸಲು ಹಿಂದೇಟು ಹಾಕುತ್ತಿದ್ದಾರೆ. ಮತ್ತೆ ಕೆಲವರು ಸಾಲ ಮಾಡಿಯಾದರೂ ತಮ್ಮ ಮಕ್ಕಳು ಮುಂದಿನ ದಿನಗಳಲ್ಲಿ ದೊಡ್ಡ ಮಟ್ಟದಲ್ಲಿ ಸಾಧನೆ ಮಾಡುವಂತಾಗಬೇಕು ಎಂದು ಇಂತಹ ಶಾಲೆಗಳಿಗೆ ಸೇರಿಸುತ್ತಾರೆ. ಆದರೆ, ಇಂತಹ ಶಾಲೆಗಳ ವಿರುದ್ಧ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಜರುಗಿಸಿ ಶುಲ್ಕವನ್ನು ಕಡಿತಗೊಳಿಸಿ ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಬೇಕು ಎನ್ನುವುದು ನೆಟ್ಟಿಗರ ಆಗ್ರಹವಾಗಿದೆ.

## ಟಿಟಿಡಿ ಮತ್ತು ಎಚ್‌ಡಿಪಿಪಿ ಆಶ್ರಯದಲ್ಲಿ ಭಜನ,ಪ್ರವಚನ,ಸಂಕೀರ್ತನ ಕಾರ್ಯಕ್ರಮ





ಅಕ್ಷರ್ ವಿಜೇತ ,ಬೆಂಗಳೂರು :

----------------------------------------

ಬೆಂಗಳೂರು : ತಿರುಮಲ ತಿರುಪತಿ ದೇವಸ್ಥಾನಗಳು ಹಿಂದೂಧರ್ಮ ಪ್ರಚಾರ ಪರಿಷತ್ ವತಿಯಿಂದ ಯಲಹಂಕ ಉಪನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಸೆಪ್ಟೆಂಬರ್ **2** ರಿಂದ **5**ರ ವರೆಗೆ ಧಾರ್ಮಿಕ/ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ಅವುಗಳ ವಿವರಗಳು ಈ ರೀತಿ ಇವೆ :

ಭಜನಾ ಕಾರ್ಯಕ್ರಮ : (ಪ್ರತಿದಿನ ಸಂಜೆ **6-00** ರಿಂದ **7-00)** ಸೆಪ್ಟೆಂಬರ್ **2**-ಯಲಹಂಕದ ವೈಷ್ಣವಿ ಭಜನಾ ಮಂಡಳಿ, ಸೆಪ್ಟೆಂಬರ್ **3**-ಮತ್ತಿಕೆರೆಯ ಶ್ರೀ ಲಕ್ಷ್ಮೀ ವೆಂಕಟೇಶ್ವರ ಭಜನಾ ಮಂಡಳಿ, ಸೆಪ್ಟೆಂಬರ್ **4**-ಯಲಹಂಕದ ಹನುಮಾನ್ ಕೀ ಜೈ ಭಜನಾ ಮಂಡಳಿ.

ಪ್ರವಚನ ಕಾರ್ಯಕ್ರಮ : ಸೆಪ್ಟೆಂಬರ್ **2** ರಿಂದ **4**ರ ವರೆಗೆ (ಪ್ರತಿದಿನ ಸಂಜೆ **7-00** ರಿಂದ **8-00)**. ಶ್ರೀ ಕಂಬಾಲೂರು ವಿಜಯವಿಠಲಾಚಾರ್ಯರಿಂದ "ಪ್ರೋಷ್ಪಪದಿ ಭಾಗವತ" ವಿಷಯವಾಗಿ ಧಾರ್ಮಿಕ ಪ್ರವಚನ.

ಹರಿನಾಮ ಸಂಕೀರ್ತನೆ : ಸೆಪ್ಟೆಂಬರ್ **5**, ಶುಕ್ರವಾರ, ಸಂಜೆ **6-30** ರಿಂದ **8-00**ರ ವರೆಗೆ "ಹರಿನಾಮ ಸಂಕೀರ್ತನೆ". ಗಾಯನ : ಶ್ರೀಮತಿ ಚಾಂದನಿ ಗರ್ತಿಗರೆ, ಮೃದಂಗ : ಶ್ರೀ ಶ್ರೀನಿವಾಸ್ ಅನಂತರಾಮಯ್ಯ, ಪಿಟೀಲು : ಶ್ರೀ ಅರ್ಜುನ್ ಎನ್.

ಕಾರ್ಯಕ್ರಮ ನಡೆಯುವ ಸ್ಥಳ : ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಯಲಹಂಕ ಉಪನಗರ, ಬೆಂಗಳೂರು-**560064.**

## ರಾಜ್ಯದ ಪಡಿತರ ಚೀಟಿದಾರರು ಗಮನಿಸಲೇಬೇಕಾದ ಮಹತ್ವದ ಮಾಹಿತಿ

ಪ್ರಮುಖ ದಾಖಲೆಗಳಲ್ಲಿ ಪಡಿತರ ಚೀಟಿ ಕೂಡ ಒಂದಾಗಿದೆ. ಇದು ಬರೀ ರೇಷನ್ ಪಡೆಯಲು ಅಷ್ಟೇ ಅಲ್ಲದೆ, ಆರೋಗ್ಯ ಸೇವೆಗಳು, ಸರ್ಕಾರಿ ಸೌಲಭ್ಯಗಳು ಸೇರಿದಂತೆ ಯಾವುದೇ ಅರ್ಜಿ ಸಲ್ಲಿಕೆಗೂ ಅತ್ಯಗತ್ಯವಾಗಿ ಬೇಕೇ ಬೇಕಾಗುತ್ತದೆ. ಇನ್ನು ಈ ಪಡಿತರ ಚೀಟಿ ಕುರಿತು ಆಗಾಗ ಅಪ್ಡೇಟ್ ಮಾಹಿತಿಗಳು ಲಭ್ಯ ಆಗುತ್ತಲಿರುತ್ತವೆ. ಹಾಗೆಯೇ ಈಗಾಗಲೇ ಪಡಿತರ ಚೀಟಿ ತಿದ್ದುಪಡಿಗೆ ಅವಕಾಶ ಮಾಡಿಕೊಡಲಾಗಿದ್ದು, ಇದಕ್ಕೆ ಕೊನೇ ದಿನಾಂಕ ಇಂದೇ ಆಗಿದೆ.ರಾಜ್ಯದಲ್ಲಿ ಪಡಿತರ ಚೀಟಿ ತಿದ್ದುಪಡಿ ಕಾರ್ಯ ಆಗಸ್ಟ್ **1** ಆರಂಭ ಆಗಿದ್ದು, ಇಂದು ಅಂದ್ರೆ, ಆಗಸ್ಟ್ **31** ಕೊನೇ ದಿನವಾಗಿದೆ. ಒಂದು ವೇಳೆ ಈ ದಿನಾಂಕ ಮುಂದೂಡಿಕೆ ಆದರೂ, ಆಗಬಹುದು. ಹಾಗಾದ್ರೆ, ಅರ್ಜಿ ಸಲ್ಲಿಕೆಗೆ ಯಾವೆಲ್ಲಾ ದಾಖಲೆಗಳು ಬೇಕು ಎನ್ನುವ ಮಾಹಿತಿಯನ್ನು ಇಲ್ಲಿ ನೀಡಲಾಗಿದೆ ತಿಳಿಯಿರಿ.ಇನ್ನು ಇದೀಗ ಪಡಿತರ ಚೀಟಿದಾರರಿಗೆ ಆಹಾರ ಇಲಾಖೆ ಹೆಸರು ಸೇರ್ಪಡೆ ಅಥವಾ ತಿದ್ದುಪಡಿಗೆ ಇಂದು ಕೊನೇ ದಿನವಾಗಿದೆ. ಪಡಿತರ ಚೀಟಿದಾರರು ಹೆಸರು ತಿದ್ದುಪಡಿ, ಹೊಸ ಸದಸ್ಯರ ಸೇರ್ಪಡೆ, ವಿಳಾಸ ಬದಲಾವಣೆ, ಹೆಸರು ತೆಗೆಯುವುದಕ್ಕೆ ಅವಕಾಶ ನೀಡಲಾಗಿದೆ. ಬೆಂಗಳೂರು ಒನ್, ಸೈಬರ್ ಸೆಂಟರ್‌ಗಳಲ್ಲಿ ಹೊಸ ಕಾರ್ಡ್ ಅಥವಾ ಹೆಸರು ಸೇರ್ಪಡೆಗೆ ಅರ್ಜಿ ಸಲ್ಲಿಕೆ ಮಾಡಬಹುದು.ಸರ್ಕಾರಿ ಅಧಿಕೃತ ವೆಬ್ ಸೈಟ್ ಸ್ವಯಂ ಆಗಿ ಭೇಟಿ ಅರ್ಜಿ ಸಲ್ಲಿಕೆ ಮಾಡಬಹುದು. ಎಪಿಎಲ್ ಕಾರ್ಡ್ ಪಡೆಯುವವರು ಸಹ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಕೆ ಮಾಡಬೇಕಿದೆ. ಈಗಾಗಲೇ ಪಡಿತರ ಚೀಟಿ ಹೊಂದಿದವರು ಹೊಸದಾಗಿ ಮಕ್ಕಳು ಅಥವಾ ತಮ್ಮ ಕುಟುಂಬದ ಇತರೆ ಸದಸ್ಯರ ಸೇರ್ಪಡೆ ಮಾಡಲು ಅವಕಾಶ ನೀಡಲಾಗಿದೆ. ಹೆಚ್ಚಿನ ಮಾಹಿತಿಗಾಗಿ **https://ahara.kar.nic.in** ವೆಬ್‌ಸೈಟ್‌ಗೆ ಭೇಟಿ ನೀಡಬಹುದಾಗಿದೆ.

**ಏನೆಲ್ಲಾ ತಿದ್ದುಪಡಿ ಮಾಡಬಹುದು?**

* ಫೋಟೋ ಬದಲಾವಣೆ
* ಹೆಸರು ತೆಗೆದುಹಾಕುವಿಕೆ
* ನ್ಯಾಯಬೆಲೆ ಅಂಗಡಿ ನಂಬರ್ ಬದಲಾವಣೆ
* ಹೆಸರು ತಿದ್ದುಪಡಿ
* ಸದಸ್ಯರ ಹೆಸರು ಸೇರ್ಪಡೆ ಹಾಗೂ ತೆಗೆದುಹಾಕುವಿಕೆ

ಅರ್ಜಿ ಸಲ್ಲಿಕೆಗೆ ಬೇಕಾದ ದಾಖಲೆಗಳು

* ಸದಸ್ಯರ ಆಧಾರ ಕಾರ್ಡ್
* ಸದಸ್ಯರ ಜಾತಿ ಮತ್ತು ಆದಾಯ **6** ವರ್ಷ ಮೆಲ್ಪಟ್ಟವರಿಗೆ
* ಜನನ ಪ್ರಮಾಣ ಪತ್ರ **6** ವರ್ಷದ ಒಳಗಿನ ಮಕ್ಕಳಿದ್ದರೆ ಮಾತ್ರ
* ಆಧಾರ್ ಕಾರ್ಡ್
* ವಿವಾಹ ಪ್ರಮಾಣ ಪತ್ರ
* ಪೋಷಕರ ಪಡಿತರ ಚೀಟಿ ಅಗತ್ಯ







ಮಗುವಿನ ಹೆಸರು ಸೇರ್ಪಡೆಗೆ ಬೇಕಾದ ದಾಖಲೆಗಳು
* ಮಗುವಿನ ಜನನ ಪ್ರಮಾಣಪತ್ರ
* ಪೋಷಕರ ಆಧಾರ್ ಕಾರ್ಡ್

* ಆನ್‌ಲೈನಲ್‌ನಲ್ಲಿ ಪಡಿತರ ಚೀಟಿಗೆ ನಿಮ್ಮ ಕುಟುಂಬದ ಯಾವುದೇ ಸದಸ್ಯರ ಹೆಸರನ್ನು ಸೇರ್ಪಡೆ ಮಾಡಲು ನೀವು ನಿಮ್ಮ ರಾಜ್ಯದ ಆಹಾರ ಸರಬರಾಜು ಇಲಾಖೆಯ ಅಧಿಕೃತ ವೆಬ್‌ಸೈಟ್‌ಗೆ ಭೇಟಿ ನೀಡಬೇಕು

ನೀವು ಐಡಿಯನ್ನು ರಚನೆ ಮಾಡಬೇಕಾಗುತ್ತದೆ. ನಿಮ್ಮ ಐಡಿಯನ್ನು ಈಗಾಗಲೇ ರಚಿಸಿದ್ದರೆ, ನೀವು ಲಾಗಿನ್ ಆಗಬೇಕು.

* ನಿಮ್ಮ ಪಡಿತರ ಚೀಟಿಯ ವಿವರಗಳನ್ನು ಪರೀಶೀಲಿಸಬಹುದು. ಅದರಲ್ಲಿ ನೀವು ಹೊಸ ಸದಸ್ಯರನ್ನು ಸೇರ್ಪಡೆ ಮಾಡುವ ಆಯ್ಕೆಯನ್ನು ಪಡೆಯುತ್ತೀರಿ. ಅದರ ಮೇಲೆ ಕ್ಲಿಕ್ ಮಾಡಿದರೆ, ನೀವು ಹೊಸ ಸದಸ್ಯರನ್ನು ಸೇರಿಸಲು ಫಾರ್ಮ್ ಅನ್ನು ಭರ್ತಿ ಮಾಡಬೇಕಾಗುತ್ತದೆ. ಜೊತೆಗೆ ಹೊಸ ಸದಸ್ಯರ ಸಂಪೂರ್ಣ ವಿವರಗಳನ್ನು ಭರ್ತಿ ಮಾಡಬೇಕು.

* ಬಳಿಕ ನಿಮ್ಮ ದಾಖಲೆಗಳನ್ನು ಅಪ್ಲೋಡ್ ಮಾಡಬೇಕಾಗುತ್ತದೆ. ವಿವರಗಳು ಮತ್ತು ದಾಖಲೆಗಳನ್ನು ಭರ್ತಿ ಮಾಡಿದ ನಂತರ, ನೀವು ಫಾರ್ಮ್ ಅನ್ನು ಸಲ್ಲಿಸಬೇಕು. ಫಾರ್ಮ್ ಅನ್ನು ಸಲ್ಲಿಸಿದ ನಂತರ, ನಿಮ್ಮ ನೋಂದಣಿ ಸಂಖ್ಯೆಯನ್ನು ನೀವು ಪಡೆಯುತ್ತೀರಿ. ನೋಂದಣಿ ಸಂಖ್ಯೆಯೊಂದಿಗೆ ನಿಮ್ಮ ವಿನಂತಿಯನ್ನು ನೀವು ಟ್ರ್ಯಾಕ್ ಮಾಡಬಹುದು.

* ನಂತರ ನಿಮ್ಮ ಫಾರ್ಮ್ ಮತ್ತು ನಿಮ್ಮ ದಾಖಲೆಗಳನ್ನು ಪರಿಶೀಲನೆ ಮಾಡಲಾಗುತ್ತದೆ. ಎಲ್ಲವೂ ಸರಿಯಾಗಿ ಇದ್ದರೆ ಹೊಸ ಸದಸ್ಯರ ಹೆಸರನ್ನು ಪಡಿತರ ಚೀಟಿಗೆ ಸೇರ್ಪಡೆ ಮಾಡಲಾಗುವುದು. ಹತ್ತಿರದ ಪಡಿತರ ಅಂಗಡಿಗೆ ಹೋಗುವ ಮೂಲಕ ನಿಮ್ಮ ಪಡಿತರ ಚೀಟಿಯಲ್ಲಿ ನಿಮ್ಮ ಹೆಸರನ್ನು ಅಪ್ಡೇಟ್ ಮಾಡಿಸಬಹುದು. ದಾಖಲೆಗಳೆಲ್ಲ ಸರಿಯಾಗಿದ್ದರೆ, ತಿದ್ದುಪಡಿಯಾದ ಹೊಸ ರೇಷನ್ ಕಾರ್ಡ್ ನಿಮ್ಮ ಕೈಗೆ ತಲುಪಲಿದೆ.

## ಸೆಪ್ಟೆಂಬರ್ ಆರಂಭದಲ್ಲೇ ಬಂಗಾರ ಬೆಲೆ ಭರ್ಜರಿ ಇಳಿಕೆ: ಇಲ್ಲಿದೆ ದರಪಟ್ಟಿ

**ಅಕ್ಷರ್ ವಿಜೇತ ,ಬೆಂಗಳೂರು :**

ಬಂಗಾರ ದರದಲ್ಲಿ ಹಾವು ಏಣಿ ಆಟದಂತೆ ಏರಿಳಿತ ಆಗುತ್ತಲಿರುತ್ತದೆ. ಅದರಲ್ಲೂ ಶ್ರಾವಣ ಮಾಸದ ಆರಂಭದಿಂದಲೂ ಕೊನೆವರೆಗೂ ಬೆಲೆ ಇಳಿಕೆಯಾಗುತ್ತಲೇ ಬಂದಿತ್ತು. ಹಾಗಾದ್ರೆ, ಇದೀಗ ಇಂದು (ಸೆಪ್ಟೆಂಬರ್ 1) ಕರ್ನಾಟಕ ರಾಜಧಾನಿ ಬೆಂಗಳೂರು ಸೇರಿದಂತೆ ದೇಶದ ಪ್ರಮುಖ ನಗರಗಳಲ್ಲಿ ಬಂಗಾರ, ಬೆಳ್ಳಿ ದರ ಎಷ್ಟಿದೆ ಎನ್ನುವ ಸಂಪೂರ್ಣ ಅಂಕಿಅಂಶಗಳ ಸಹಿತ ವಿವರವನ್ನು ಇಲ್ಲಿ ನೀಡಲಾಗಿದೆ ಗಮನಿಸಿ.

ಬಂಗಾರ ದರಗಳ ವಿವರ: ನಿನ್ನೆ (ಆಗಸ್ಟ್ 31) ಬೆಂಗಳೂರು ಸೇರಿದಂತೆ ದೇಶದ ಬಹುತೇಕ ಕಡೆಗಳಲ್ಲಿ 10 ಗ್ರಾಂ (22 ಕ್ಯಾರೆಟ್) ಬಂಗಾರ ದರ 96,200 ರೂಪಾಯಿ ಇದ್ದರೆ, ಇಂದು (ಸೆಪ್ಟೆಂಬರ್ 1) 96,190 ರೂಪಾಯಿಗೆ ಇಳಿಕೆಯಾಗಿದೆ. 10 ಗ್ರಾ (24 ಕ್ಯಾರೆಟ್) ನಿನ್ನೆ ದರ 1,04,950 ರೂಪಾಯಿ ಇತ್ತು. ಇನ್ನು ಇಂದು 1,04,940 ರೂಪಾಯಿ ಇದೆ. ಹಾಗಾದರೆ, ಕರ್ನಾಟಕ ರಾಜ್ಯ ರಾಜಧಾನಿ ಬೆಂಗಳೂರು ಸೇರಿದಂತೆ ದೇಶದ ಪ್ರಮುಖ ನಗರಗಳಲ್ಲಿ ಇಂದಿನ ಬಂಗಾರ, ಬೆಳ್ಳಿ ದರ ಪಟ್ಟಿ ಇಲ್ಲಿದೆ ಪರಿಶೀಲಿಸಿ.

8 ಗ್ರಾಂ ಬಂಗಾರ ದರ
* 22 ಕ್ಯಾರೆಟ್ ಚಿನ್ನದ ಬೆಲೆ - 76,952 ರೂಪಾಯಿ
* 24 ಕ್ಯಾರೆಟ್ ಚಿನ್ನದ ಬೆಲೆ (ಅಪರಂಜಿ) - 83,952 ರೂಪಾಯಿ

10 ಗ್ರಾಂ ಬಂಗಾರ ದರ
22 ಕ್ಯಾರೆಟ್ ಚಿನ್ನದ ದರ - 96,190 ರೂಪಾಯಿ
24 ಕ್ಯಾರೆಟ್ ಬಂಗಾರ ದರ (ಅಪರಂಜಿ) - 1,04,940 ರೂಪಾಯಿ

ವಿವಿಧ ನಗರಗಳಲ್ಲಿ ಬಂಗಾರ ದರ 22 ಕ್ಯಾರೆಟ್ (10 ಗ್ರಾಂ)
* ಬೆಂಗಳೂರು - 96,190 ರೂಪಾಯಿ
* ಚೆನ್ನೈ - 96,190 ರೂಪಾಯಿ
* ಮುಂಬೈ - 96,190 ರೂಪಾಯಿ
* ಕೋಲ್ಕತ್ತಾ - 96,190 ರೂಪಾಯಿ
* ನವದೆಹಲಿ - 96,340 ರೂಪಾಯಿ
* ಹೈದರಾಬಾದ್ - 96,190 ರೂಪಾಯಿ




### ವಿವಿಧ ನಗರಗಳಲ್ಲಿ ಬಂಗಾರ ದರ 24 ಕ್ಯಾರೆಟ್ (10 ಗ್ರಾಂ)

ವಿವಿಧ ನಗರಗಳಲ್ಲಿ ಬಂಗಾರ ದರ 24 ಕ್ಯಾರೆಟ್ (10 ಗ್ರಾಂ)
* ಬೆಂಗಳೂರು - 1,04,940 ರೂಪಾಯಿ
* ಚೆನ್ನೈ - 1,04,940 ರೂಪಾಯಿ
* ಮುಂಬೈ - 1,04,940 ರೂಪಾಯಿ
* ಕೋಲ್ಕತ್ತಾ - 1,04,940 ರೂಪಾಯಿ
* ನವದೆಹಲಿ - 1,05,090 ರೂಪಾಯಿ
* ಹೈದರಾಬಾದ್ - 1,04,940 ರೂಪಾಯಿ

ದೇಶದ ಪ್ರಮುಖ ನಗರಗಳಲ್ಲಿ ಬೆಳ್ಳಿ ದರ (ಕೆಜಿ ಲೆಕ್ಕದಲ್ಲಿ)
* ಬೆಂಗಳೂರು - 1,24,900 ರೂಪಾಯಿ (100 ಇಳಿಕೆ)
* ಚೆನ್ನೈ - 1,34,900 ರೂಪಾಯಿ (100 ಇಳಿಕೆ)
* ಮುಂಬೈ - 1,24,900 ರೂಪಾಯಿ (100 ಇಳಿಕೆ)
* ಕೋಲ್ಕತ್ತಾ - 1,24,900 ರೂಪಾಯಿ (100 ಇಳಿಕೆ)
* ನವದೆಹಲಿ - 1,24,900 ರೂಪಾಯಿ (100 ಇಳಿಕೆ)
* ಹೈದರಾಬಾದ್ - 1,34,900 ರೂಪಾಯಿ (100 ಇಳಿಕೆ)

### ಬಂಗಾರ, ಬೆಳ್ಳಿ ದರಪಟ್ಟಿ:

ಹಬ್ಬಗಳು ಹತ್ತಿರ ಬರುತ್ತಿದ್ದಂತೆ ಬಂಗಾರ, ಬೆಳ್ಳಿ, ಕೊಳ್ಳುವವರ ಸಂಖ್ಯೆ ತುಸು ಹೆಚ್ಚಾಗಿರುತ್ತದೆ. ಸಾಮಾನ್ಯ ದಿನಗಳಲ್ಲೂ ಸಹ ಬಂಗಾರ ಕೊಳ್ಳುವವರ ಸಂಖ್ಯೆಯೇನು ಕಡಿಮೆ ಇರುವುದಿಲ್ಲ. ದರ ಕಡಿಮೆಯಿರಲಿ, ಬಿಡಲಿ ಆಭರಣಗಳನ್ನು ಕಷ್ಟದ ಕಾಲಕ್ಕೆ ಆಗುತ್ತವೆಂದು ಕೊಂಡುಕೊಳ್ಳುತ್ತಲಿರುತ್ತಾರೆ. ಹಬ್ಬ, ಹರಿ ದಿನಗಳಲ್ಲಂತೂ ತುಸು ಹೆಚ್ಚಿನ ಪ್ರಮಾಣದಲ್ಲಿ ಬಂಗಾರ ಕೊಳ್ಳುತ್ತಾರೆ. ಅದರಲ್ಲೂ ಶ್ರಾವಣ ಮಾಸ ಆರಂಭದಿಂದ ಕೊನೆವರೆಗೂ ಕಡಿಮೆಯಾಗುತ್ತಲೇ ಬಂದಿತ್ತು, ಆದರೆ, ಇದೀಗ ಮತ್ತೆ ಸೆಪ್ಟೆಂಬರ್ ಆರಂಭದಲ್ಲೇ ಇಳಿಕೆಯಾಗಿದ್ದು, ಮುಂದಿನ ದಿನಗಳಲ್ಲಿ ಇದೇ ಮುಂದುವರೆಯಲೂಬಹುದು ಅಥವಾ ಏರಿಕೆಯೂ ಆಗಬಹುದು. ಆದ್ದರಿಂದ ಕೊಂಡುಕೊಳ್ಳುವುದಕ್ಕೆ ಇದೇ ಉತ್ತಮ ಸಮಯ.

# ಸೈಕ್ಲೋನ್ ಆರ್ಭಟ: ಬೆಂಗಳೂರಲ್ಲಿ ಧಾರಾಕಾರ ಮಳೆ, ಇನ್ನೆಷ್ಟು ದಿನ ಮಳೆ ಇರಲಿದೆ



ಅಕ್ಷರ್ ವಿಜೇತ ,ಬೆಂಗಳೂರು : |

ಬೆಂಗಳೂರಿನಲ್ಲಿ ಸೈಕ್ಲೋನ್ ಆರ್ಭಟ ಮುಂದುವರಿದಿದೆ. ಕಳೆದೊಂದು ವಾರದಿಂದಲೂ ಬೆಂಗಳೂರಿನಲ್ಲಿ ಮಳೆ ಆಗುತ್ತಿದೆ. ವಾರಾಂತ್ಯದಂದು ಬೆಂಗಳೂರಿನ ಹಲವು ಭಾಗದಲ್ಲಿ ಧಾರಾಕಾರ ಮಳೆಯಾಗಿದೆ. ಬೆಂಗಳೂರಿನಲ್ಲಿ ಸೆಪ್ಟೆಂಬರ್ **3**ರ ವರೆಗೆ ಬೆಂಗಳೂರಿನಲ್ಲಿ ಮಳೆ ಮುಂದುವರಿಯುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆಯು ಮುನ್ಸೂಚನೆ ನೀಡಿದೆ.ಸೈಕ್ಲೋನ್ ಪ್ರಭಾವದಿಂದಾಗಿ ಬೆಂಗಳೂರು ಸೇರಿದಂತೆ ಕರ್ನಾಟಕದ ವಿವಿಧ ಭಾಗದಲ್ಲಿ ಮಳೆ ಆರ್ಭಟ ಮುಂದುವರಿದಿದೆ. ಅಲ್ಲದೇ ದೇಶದಾದ್ಯಂತ ಭಾರೀ ಮಳೆ ಆಗುತ್ತಿರುವುದರ ನಡುವೆಯೇ ಅರಬ್ಬೀ ಸಮುದ್ರದಲ್ಲಿ ತೂಫಾನ್ ಉಂಟಾಗಿ ಇನ್ನಷ್ಟು ಜೋರು ಮಳೆ ಮುಂದುವರಿಯುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ವರದಿ ಉಲ್ಲೇಖಿಸಿದೆ. ಭಾನುವಾರ ನಗರದ ವಿವಿಧ ಭಾಗದಲ್ಲಿ ಧಾರಾಕಾರ ಮಳೆ ಆಗಿದ್ದು ವೀಕೆಂಡ್ ಮೂಡ್‌ನಲ್ಲಿದ್ದ ಜನ ಪರದಾಡಿದರು.ಸೆಪ್ಟೆಂಬರ್ **02**ರ ಸುಮಾರಿಗೆ ಬಂಗಾಳಕೊಲ್ಲಿಯ ವಾಯುವ್ಯ ಭಾಗದಲ್ಲಿ ಹೊಸ ಕಡಿಮೆ ಒತ್ತಡದ ಪ್ರದೇಶವು ರೂಪುಗೊಳ್ಳುವ ಸಾಧ್ಯತೆಯಿದೆ. ಇದರಿಂದ ಬೆಂಗಳೂರು ಸೇರಿದಂತೆ ಕರ್ನಾಟಕದ ವಿವಿಧ ಭಾಗದಲ್ಲಿ ಧಾರಾಕಾರ ಮಳೆ ಆಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ. ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತ ಹಾಗೂ ತೂಫಾನ್‌ನಿಂದಾಗಿ ಭಾರೀ ಮಳೆ ಆಗಲಿದೆ ಎಂದು ಹೇಳಲಾಗಿದೆ.

ಮುಂದಿನ **24** ಗಂಟೆಗಳು: ಇನ್ನು ಬೆಂಗಳೂರಲ್ಲಿ ಸಾಮಾನ್ಯವಾಗಿ ಮುಂದಿನ **24** ಗಂಟೆ ಅವಧಿಯಲ್ಲಿ ಮೋಡ ಕವಿದ ವಾತಾವರಣ ಇರಲಿದೆ. ಹಗುರದಿಂದ ಮಧ್ಯಮ ಮಳೆ/ಗುಡುಗು ಸಹಿತ ಮಳೆಯಾಗುವ ಸಾಧ್ಯತೆ. ಗಂಟೆಗೆ **30-40** ಕಿ.ಮೀ. ವೇಗದಲ್ಲಿ ಬಿರುಗಾಳಿ ಬೀಸುವ ಸಾಧ್ಯತೆ. ಗರಿಷ್ಠ ಮತ್ತು ಕನಿಷ್ಠ ತಾಪಮಾನ ಕ್ರಮವಾಗಿ **29°C** ಮತ್ತು **21°C** ಇರುವ ಸಾಧ್ಯತೆ ಇದೆ ಎಂದು ಐಎಂಡಿ ಹೇಳಿದೆ.

ಇನ್ನು ಬೆಂಗಳೂರಿನಲ್ಲಿ ಮುಂದಿನ **48** ಗಂಟೆಗಳು ಸಾಮಾನ್ಯವಾಗಿ ಮೋಡ ಕವಿದ ವಾತಾವರಣ. ಹಗುರದಿಂದ ಮಧ್ಯಮ ಮಳೆಯಾಗುವ ಸಾಧ್ಯತೆ. ಗಂಟೆಗೆ **30- 40** ಕಿ.ಮೀ. ವೇಗದಲ್ಲಿ ನಿರಂತರ ಗಾಳಿ ಬೀಸುವ ಸಾಧ್ಯತೆ ಇದೆ. ಗರಿಷ್ಠ ಮತ್ತು ಕನಿಷ್ಠ ತಾಪಮಾನ ಕ್ರಮವಾಗಿ **29°C** ಮತ್ತು **21°C** ಇರುವ ಸಾಧ್ಯತೆ ಇದೆ ಎಂದು ಐಎಂಡಿ ವರದಿ ಹೇಳಿದೆ.

ರಸ್ತೆ ಗುಂಡಿ ಮುಚ್ಚುವುದಕ್ಕೆ ವಿಳಂಬ: ಬೆಂಗಳೂರಿನಲ್ಲಿ ಇತ್ತೀಚಿನ ದಿನಗಳಲ್ಲಿ ರಸ್ತೆ ಗುಂಡಿಗಳ ಸಂಖ್ಯೆ ಹೆಚ್ಚಾಗಿದೆ. ಕಳೆದ ಒಂದ ವಾರದಿಂದಲೂ ಬೆಂಗಳೂರಿನಲ್ಲಿ ರಸ್ತೆಗುಂಡಿಗಳನ್ನು ಮುಚ್ಚುವ ಕೆಲಸವನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರಿಗಳು ಮಾಡುತ್ತಿದ್ದರು. ಆದರೆ, ಇದೀಗ ಕಳೆದ ಮೂರು ದಿನಗಳಿಂದಲೂ ನಿರಂತರವಾಗಿ ಮಳೆ ಆಗುತ್ತಿರುವುದರಿಂದ ಬೆಂಗಳೂರಿನಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವುದಕ್ಕೆ ಸಾಧ್ಯವಾಗುತ್ತಿಲ್ಲ. ಮತ್ತೆ ಬೆಂಗಳೂರಿನಲ್ಲಿ ಸಾರ್ವಜನಿಕರು ರಸ್ತೆ ಗುಂಡಿಗಳ ಸಮಸ್ಯೆಯಿಂದ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ.

# ಬಿಗ್‌ಬಾಸ್ ಕನ್ನಡ ಸೀಸನ್-12ರ ದಿನಾಂಕ ಘೋಷಿಸಿದ ಕಿಚ್ಚ ಸುದೀಪ್




ಅಕ್ಷರ್ ವಿಜೇತ |

ನಟ ಕಿಚ್ಚ ಸುದೀಪ್ ಅವರೇ ಕನ್ನಡ ಬಿಗ್‌ಬಾಸ್ ಸೀಸನ್-12 ರಿಯಾಲಿಟಿ ಶೋ ನಿರೂಪಣೆ ಮಾಡುವುದು ಪಕ್ಕಾ ಆಗಿದೆ. ಇದೀಗ ಬಿಗ್‌ಬಾಸ್ ಬಗ್ಗೆ ಕಿಚ್ಚ ಸುದೀಪ್ ಅವರೇ ದೊಡ್ಡ ಘೋಷಣೆ ಮಾಡಿ ಗುಡ್‌ನ್ಯೂಸ್ ನೀಡಿದ್ದಾರೆ. ಸುದೀಪ್ ಅವರ ಹುಟ್ಟುಹಬ್ಬಕ್ಕೆ ಬಿಗ್‌ಬಾಸ್ ಕಡೆಯಿಂದ ಸರ್‌ಪ್ರೈಸ್ ಇದೆ ಎಂದು ಹೇಳಲಾಗಿತ್ತು. ಆದರೆ ಸುದೀಪ್ ಇದಕ್ಕೂ ಮುನ್ನವೇ ಈ ಬಿಗ್‌ಬಾಸ್ ಸೀಸನ್ ಶುರುವಾಗುವ ದಿನಾಂಕ ಘೋಷಿಸಿದ್ದಾರೆ.ಇಂದು ಮೈಸೂರಿನಲ್ಲಿ ನಡೆದ ನಿರ್ಮಾಪಕ, ಉದ್ಯಮಿ, ರಾಜಕಾರಣಿ ಸಂದೇಶ್ ನಾಗರಾಜ್ ಅವರ ಹುಟ್ಟುಹಬ್ಬದ ಕಾರ್ಯಕ್ರಮದಲ್ಲಿ ನಟ ಸುದೀಪ್ ಅತಿಥಿಯಾಗಿ ಭಾಗಿಯಾಗಿದ್ದರು. ಇದೇ ವೇದಿಕೆಯಲ್ಲಿ ಸುದೀಪ್ ಬಿಗ್‌ಬಾಸ್ ಕಾರ್ಯಕ್ರಮದ ಬಗ್ಗೆ ಮಾತನಾಡಿದ್ದಾರೆ. ಈ ವೇಳೆ ಅಲ್ಲಿದ್ದ ಅಭಿಮಾನಿಗಳು ಕೂಗಾಡಿದ್ದರಿಂದ "ಶೀಘ್ರವೇ ಕಿರುತೆರೆ ಮೇಲೆ ಬರುತ್ತಿದ್ದೇನೆ ಎಂದು ದಿನಾಂಕ ಘೋಷಿಸಿದ್ದಾರೆ.ಬಿಗ್‌ಬಾಸ್ ಯಾವಾಗ ಶುರುವಾಗುತ್ತೆ? ಎಂದು ಎಲ್ಲರೂ ಕಾತರದಿಂದ ಕಾದಿದ್ದರು. ಇತ್ತೀಚೆಗೆ ಲೋಗೋ ಲಾಂಚ್ ಮಾಡಿದ್ದ ಬಿಗ್‌ಬಾಸ್ ದಿನಾಂಕ ಘೋಷಿಸಿರಲಿಲ್ಲ. ಸಾಮಾನ್ಯವಾಗಿ ಸೆಪ್ಟೆಂಬರ್‌ನಲ್ಲೇ ಶುರುವಾಗುತ್ತೆ ಎಂದು ನಿರೀಕ್ಷಿಸಿದ್ದರು. ಸೆಪ್ಟೆಂಬರ್ ಎರಡರಂದು ಸುದೀಪ್ ಅವರ ಹುಟ್ಟುಹಬ್ಬದಂದೇ ಬಿಗ್‌ಬಾಸ್ ಓಪನಿಂಗ್ ದಿನಾಂಕ ಘೋಷಣೆಯಾಗಲಿದೆ ಎಂದೂ ಹೇಳಲಾಗಿತ್ತು. ಆದರೆ ಸುದೀಪ್ ಅವರೇ ದಿಢೀರನೆ ಬಿಗ್‌ಬಾಸ್ ದಿನಾಂಕ ಅನೌನ್ಸ್ ಮಾಡಿದ್ದಾರೆ.

ಕಿರುತೆರೆಗೆ ಬರ್ತಿದ್ದೀನಿ, ಆಶೀರ್ವದಿಸಿ

ಮೈಸೂರಿನಲ್ಲಿ ಮಾತನಾಡಿರುವ ಸುದೀಪ್, 'ಶೀಘ್ರವೇ ತೆರೆ ಮೇಲೆ ಬರಲಿದ್ದೇನೆ, ಸೆಪ್ಟೆಂಬರ್ 28ರಿಂದ ಕಿರುತೆರೆಗೆ ಬರಲಿದ್ದೇನೆ, ಎಲ್ಲರೂ ಆಶೀರ್ವಾದ ಮಾಡಿ' ಎಂದಿದ್ದಾರೆ. ಹಾಗಾಗಿ ಬಿಗ್ಬಾಸ್ ಸೀಸನ್-12 ಸೆಪ್ಟೆಂಬರ್ 28ಕ್ಕೆ ಪ್ರಾರಂಭವಾಗುವುದು ಫಿಕ್ಸ್ ಆಗಿದೆ. ಈ ಬಾರಿಯೂ ಸುದೀಪ್ ಅವರೇ ಬಿಗ್ಬಾಸ್ ನಡೆಸಿಕೊಡಲಿದ್ದಾರೆ. ಹಾಗಾಗಿ ದಿನಾಂಕವನ್ನೂ ಅವರೇ ಅಧಿಕೃತವಾಗಿ ಘೋಷಣೆ ಮಾಡಿರುವುದು ಬಿಗ್‌ಬಾಸ್ ಅಭಿಮಾನಿಗಳ ಸಂತೋಷವನ್ನು ದುಪ್ಪಟ್ಟು ಮಾಡಿದೆ.

ಬಿಗ್‌ಬಾಸ್ ಹೊಣೆ ಹೊತ್ತ ಕಿಚ್ಚ

ಇಲ್ಲಿವರೆಗೆ ಕಿಚ್ಚ ಸುದೀಪ್ ಅವರೇ ಬಿಗ್‌ಬಾಸ್ ಹಲವು ಸೀಸನ್‌ಗಳನ್ನು ನಿರೂಪಣೆ ಮಾಡಿದ್ದರು. ಬಿಗ್‌ಬಾಸ್ ಅಂದ್ರೆ ಸುದೀಪ್ ಎಂಬ ಜನಪ್ರಿಯತೆಯೂ ಪಡೆದಿದ್ದರು. ಆದರೆ ಕಳೆದ ಸೀಸನ್‌ನಲ್ಲೇ ಸುದೀಪ್ ಬಿಗ್‌ಬಾಸ್‌ಗೆ ಗುಡ್‌ಬೈ ಹೇಳಿದ್ದರು. ಮುಂದಿನ ಸೀಸನ್‌ನಿಂದ ನಾನು ಬಿಗ್‌ಬಾಸ್ ನಿರೂಪಣೆ ಮಾಡಲ್ಲ ಎಂದು ಘೋಷಿಸಿದ್ದರು. ಕೆಲ ಅಸಮಾಧಾನಗಳಿಂದ ಸುದೀಪ್ ಈ ನಿರ್ಧಾರ ತೆಗೆದುಕೊಂಡಿದ್ದಾಗಿ ಹೇಳಲಾಗಿತ್ತು. ಇನ್ನು ಸುದೀಪ್ ಇಲ್ಲದ ಬಿಗ್‌ಬಾಸ್ ನೋಡಲ್ಲ ಎಂದು ಪ್ರೇಕ್ಷಕರು ಕೂಡ ಬೇಸರ ಹಂಚಿಕೊಂಡಿದ್ದರು.ಆದರೆ ಬಿಗ್‌ಬಾಸ್ ಆಯೋಜಕರು ಮತ್ತೆ ಸುದೀಪ್ ಅವರನ್ನು ಮನವೊಲಿಸಿ ಮತ್ತೆ ನಿರೂಪಣೆಗೆ ಒಪ್ಪಿಸಿದೆ. ಸುದೀಪ್ ಅವರ ಬೇಡಿಕೆಗಳನ್ನು ಬಿಗ್‌ಬಾಸ್ ಆಯೋಜಕರು ಈಡೇರಿಸುವುದಾಗಿ ಭರವಸೆ ನೀಡಿದ ಹಿನ್ನೆಲೆ ಮುಂದಿನ ಹಲವು ಸೀಸನ್‌ಗಳವರೆಗೆ ಸುದೀಪ್ ಅವರೇ ಬಿಗ್‌ಬಾಸ್ ನಿರೂಪಣೆ ಮಾಡಲು ಒಪ್ಪಿಕೊಂಡಿದ್ದಾರೆ. ಇನ್ನು ಬಿಗ್‌ಬಾಸ್ ಆರಂಭಕ್ಕೆ ದಿನಗಣನೆ ಶುರುವಾಗಿದ್ದು, ಎಲ್ಲರೂ ಕಾತರದಿಂದ ಕಾದಿದ್ದಾರೆ. ಈ ಬಾರಿಯ ಸ್ಪರ್ಧಿಗಳು ಯಾರು ಎಂಬ ಕುತೂಹಲ ಎಲ್ಲರಲ್ಲಿ ಮನೆ ಮಾಡಿದೆ.

# ಪ್ರೇಕ್ಷಕರ ಮನಗೆದ್ದ ಮಕ್ಕಳ "ನೃತ್ಯ ಪ್ರದರ್ಶನ"





ಅಕ್ಷರ್ ವಿಜೇತ,ಬೆಂಗಳೂರು : ನಗರದ ಕಲ್ಯಾಣಿ ಹೌಸಿಂಗ್ ಕೋ-ಆಪರೇಟಿವ್ ಸೊಸೈಟಿ ಬಡಾವಣೆಯಲ್ಲಿ ಆಗಸ್ಟ್ **30**, ಶನಿವಾರ ಸಂಜೆ ಏರ್ಪಡಿಸಿದ್ದ ಗಣೇಶೋತ್ಸವ ಸಮಾರಂಭದಲ್ಲಿ ವಿದುಷಿ ಡಾ|| ದರ್ಶಿನಿ ಮಂಜುನಾಥ್ ಅವರ ನಿರ್ದೇಶನದಲ್ಲಿ ನೃತ್ಯ ದಿಶಾ ಟ್ರಸ್ಟಿನ ವಿದ್ಯಾರ್ಥಿಗಳಾದ,ಭೂಷಿತ, ಸಂಚಿತ, ಕವನ, ಅನ್ವಿತ, ಧನ್ವಿ, ಶ್ರಗ್ವಿ, ಅದಿತಿ ಪರ್ಣಿಕ, ಪ್ರಚಿತಾ, ಶಿವಾನಿ, ಆಸ್ತಾ, ಅನ್ವಿ, ಭವಿತಾ, ಪೂರ್ವಿಕ,ಚೈತನ್ಯ, ರುಚಿತಾ, ಭೈರವಿ ಹಾಗೂ ಸಂಸ್ಥೆಯ ಕಿರಿಯ ವಿದ್ಯಾರ್ಥಿಗಳೂ ಸಹ "ಭರತನಾಟ್ಯ ಪ್ರದರ್ಶನ ಕಾರ್ಯಕ್ರಮವನ್ನು ನೀಡಿದರು. ಗಣೇಶನ ನೃತ್ಯ ರೂಪಕ ಎಲ್ಲರ ಪ್ರಶಂಸೆಗೆ ಪಾತ್ರವಾಯಿತು ಎಂದು ಟ್ರಸ್ಟಿನ ನಿರ್ದೇಶಕಿ ಡಾ|| ದರ್ಶಿನಿ ಮಂಜುನಾಥ್ ಅವರು ತಿಳಿಸಿದ್ದಾರೆ.